# ಅಭಿನಂದನೆ ಮತ್ತು ಸನ್ಮಾನ

**ಬೆಂಗಳೂರು** : ರಾಷ್ಟ್ರೀಯ ಸಹಕಾರ ಶಿಕ್ಷಣ ಕೇಂದ್ರ (National Council for Cooperative Training-NCCT) ದ ಕಾರ್ಯನಿರ್ವಾಹಕ ಮಂಡಳಿ (Executive Council)ಗೆ ಶ್ರೀ ಸತೀಶ್ ಮರಾಠೆ, ಶ್ರೀ ಮಾರ್ಕಂಡೇಯ ಸಿಂಗ್, ಶ್ರೀ ಎಂ.ಜಿ. ಪಾಟೀಲರವರು ನಾಮನಿರ್ದೇಶನವಾಗಿದ್ದು, ಶ್ರೀಯುತರುಗಳಿಗೆ ದಿನಾಂಕ 19 ಜೂನ್ 2018ರಂದು ನಡೆದ ಆಡಳಿತ ಮಂಡಲಿ ಸಭೆಯಲ್ಲಿ ಅಭಿನಂದನೆಗಳನ್ನು ಸಲ್ಲಿಸಲಾಯಿತು. ನಂತರ ರಾಷ್ಟ್ರೀಯ ಸಹಕಾರ ಶಿಕ್ಷಣ ಕೇಂದ್ರದ ಕಾರ್ಯನಿರ್ವಾಹಕ ಮಂಡಳಿಗೆ ನಾಮನಿರ್ದೇಶಿತರಾಗಿರುವ ಸಂಯುಕ್ತ ಸಹಕಾರಿಯ ಆಹ್ವಾನಿತ ಸದಸ್ಯರಾದ ಶ್ರೀ ಎಂ.ಜಿ.ಪಾಟೀಲರವರಿಗೆ ಸಂಯುಕ್ತ ಸಹಕಾರಿಯ ಆಡಳಿತ ಮಂಡಲಿ ಸದಸ್ಯರ ಪರವಾಗಿ ಸನ್ಮಾನಿಸಲಾಯಿತು.

ನಂತರ ಪ್ರಾದೇಶಿಕ ಸಹಕಾರ ನಿರ್ವಹಣಾ ಸಂಸ್ಥೆ, ಬೆಂಗಳೂರು ಇದರ ಆಡಳಿತ ಮಂಡಳಿಯ ಸದಸ್ಯರಾಗಿ ನೇಮಕವಾಗಿರುವ ಸಂಯುಕ್ತ ಸಹಕಾರಿಯ ಅಧ್ಯಕ್ಷರಾದ



ಶ್ರೀ ಬಿ.ಹೆಚ್.ಕೃಷ್ಣಾರೆಡ್ಡಿರವರಿಗೆ ಸಂಯುಕ್ತ ಸಹಕಾರಿಯ ಆಡಳಿತ ಮಂಡಲಿ ಸದಸ್ಯರ ಪರವಾಗಿ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಸಂಯುಕ್ತ ಸಹಕಾರಿಯ ಹಿಂದಿನ ಅಧ್ಯಕ್ಷರು ಹಾಗೂ ನಿರ್ದೇಶಕರಾಗಿದ್ದ, ಪ್ರಸ್ತುತ ಕ್ಯಾಂಪ್ಕೋ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಎಸ್.ಆರ್.ಸತೀಶ್ಚಂದ್ರರವರು ಪ್ರಾದೇಶಿಕ ಸಹಕಾರ ನಿರ್ವಹಣಾ ಸಂಸ್ಥೆ, ಬೆಂಗಳೂರು ಇದರ ಆಡಳಿತ ಮಂಡಳಿಯ ಸದಸ್ಯರಾಗಿ ನೇಮಕವಾಗಿರುವ ಹಿನ್ನಲೆಯಲ್ಲಿ ಶೀಯುತರಿಗೆ ಅಭಿನಂದನೆಗಳನ್ನು ಸಲ್ಲಿಸಲಾಯಿತು.